# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 181 (248) |
| 2. | ಸದಸ್ಯರ ಹೆಸರು | : | ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3. | ಉತ್ತರಿಸಬೇಕಾದ ದಿನಾಂಕ | : | 09.12.2025 |
| 4. | ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರಿನಲ್ಲಿ ಉದ್ದೇಶಿತ 2 ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣ ಯೋಜನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು: (ವಿವರ ನೀಡುವುದು) | ಬೆಂಗಳೂರಿನಲ್ಲಿ 2ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಿ 3 ಸ್ಥಳಗಳನ್ನು ಗುರುತಿಸಲಾಗಿದೆ. ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ(AAI) ಸಂಸ್ಥೆಯ ತಾಂತ್ರಿಕ ತಂಡವು ದಿನಾಂಕ:07.04.2025 ರಿಂದ 09.04.2025 ವರೆಗೆ ಈ ಮೂರು ಸ್ಥಳಗಳ ಪರಿವೀಕ್ಷಣೆಯನ್ನು ಕೈಗೊಂಡಿದ್ದು, ಕೇಂದ್ರ ಸರ್ಕಾರದ ನಾಗರೀಕ ವಿಮಾನಯಾನ ಸಚಿವಾಲಯದಿಂದ ಪೂರ್ವ ಕಾರ್ಯ ಸಾಧ್ಯತಾ ವರದಿಯು ದಿನಾಂಕ:28.10.2025ರಂದು ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ (KSIIDC)ದಲ್ಲಿ ಸ್ವೀಕೃತವಾಗಿರುತ್ತದೆ.<br><br>ಪ್ರಸ್ತುತ ಕಾರ್ಯ ಸಾಧ್ಯತಾ ವರದಿಯನ್ನು ತಯಾರಿಸುವ ಸಮಾಲೋಚಕರನ್ನು (Transaction Advisor) ಆಯ್ಕೆ ಮಾಡಲು ಟೆಂಡರ್ ಆಹ್ವಾನಿಸಿದ್ದು, ಶೀಘ್ರವಾಗಿ ಸಮಾಲೋಚಕರ ಆಯ್ಕೆಯನ್ನು ಅಂತಿಮಗೊಳಿಸಲಾಗುವುದು. |
| (ಆ) | ಉದ್ದೇಶಿತ ಯೋಜನೆಯ ಸ್ಥಳಗಳಿಗೆ ಸಂಬಂಧಿಸಿದಂತೆ ಫಿಜಿಬಿಲಿಟಿ ಅಧ್ಯಯನ ನಡೆಸಲು ಸಮಾಲೋಚಕರ ಕಂಪನಿಗಳನ್ನು ಆಯ್ಕೆ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಆ ಕಂಪನಿಗಳು ಯಾವುವು; (ಮಾಹಿತಿ ಒದಗಿಸುವುದು) | |
| (ಇ) | ಬೆಂಗಳೂರು ದಕ್ಷಿಣ ಭಾಗದಲ್ಲಿರುವ ಅತ್ಯಧಿಕ ಪ್ರಯಾಣಿಕರು ಮತ್ತು ಕಾರ್ಗೋ ಪ್ರಮಾಣವನ್ನು ಗುರಿಯಾಗಿಸಿಕೊಂಡು ಗಡಿಭಾಗದ ಹೊಸೂರಿನಲ್ಲಿ ಅತ್ಯಧಿಕ ಸಾಮರ್ಥ್ಯದ ನೂತನ ವಿಮಾನ ನಿಲ್ದಾಣಕ್ಕೆ ತಮಿಳುನಾಡು ಸರ್ಕಾರ ಕಾರ್ಯ ಪ್ರವೃತ್ತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ದಕ್ಷಿಣ ಭಾಗದಲ್ಲಿ ನೂತನ ವಿಮಾನ ನಿಲ್ದಾಣಕ್ಕೆ ತಮಿಳುನಾಡು ಸರ್ಕಾರ ಕಾರ್ಯ ಪ್ರವೃತ್ತವಾಗಿರುವುದು ವಾರ್ತಾ ಪತ್ರಿಕೆಗಳಿಂದ ತಿಳಿದು ಬಂದಿದ್ದು, ಅದರ ಸಾಮರ್ಥ್ಯದ ವಿವರಗಳು ಲಭ್ಯವಿರುವುದಿಲ್ಲ. |
| (ಈ) | ಬಂದಿದ್ದಲ್ಲಿ ಸರ್ಕಾರ ವಿಳಂಬ ಮಾಡುತ್ತಿರುವುದಕ್ಕೆ ಕಾರಣವೇನು? | ಉದ್ಭವಿಸುವುದಿಲ್ಲ. |

ಸಂಖ್ಯೆ:ಮೂಅಇ 242 ರಾಅವಿ 2025

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು